**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ:- ಶ್ರೀ ಆರ್. ದೇವರಾಜು, ಅಂದಿನ ಸಹಾಯಕ ಯೋಜನಾಧಿಕಾರಿ (ಪ್ರಸ್ತುತ ನಿವೃತ್ತ) ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧ ಶಿಸ್ತು ಕ್ರಮ - ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-2 ರವರಿಗೆ ವಹಿಸುವ ಬಗ್ಗೆ - ಆದೇಶ.

ಓದಲಾಗಿದೆ:- 1) ಉಪ ನಿಬಂಧಕರು, ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. Compt/ Uplok/ BD-3283/2015 DRE-1 ದಿನಾಂಕ. 06.08.2016.

2) ಮಾನ್ಯ ಉಪ ಲೋಕಾಯುಕ್ತ-2ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ Compt/ Uplok/ BD-3283/2015 DRE-1 ದಿನಾಂಕ. 01/02.08.2016.

-----

**ಪ್ರಸ್ತಾವನೆ**

ಉಪ ನಿಬಂಧಕರು, ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 06.08.2016ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತ-2ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತ-2 ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತ-2 ರವರು ಲೋಕಾಯುಕ್ತ ಕಾಯ್ದೆ ಕಲಂ 12 (3)ರಂತೆ ಸಲ್ಲಿಸಿರುವ ವರದಿ, ತನಿಖಾ ವರದಿ ಮತ್ತು ಲಗತ್ತಿಸಿರುವ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ಆರ್. ಗಿರೀಶ್ ಕುಮಾರ್ ಬಿನ್ ರಂಗೇಗೌಡ, ಭೂಮನಹಳ್ಳಿ, ಗೌರಿಬಿದನೂರು ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರು ಶ್ರೀ ಆರ್. ದೇವರಾಜು, ಸಹಾಯಕ ಯೋಜನಾಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ ಜಿಲ್ಲೆ ಇವರು ಅಕ್ರಮ ಆಸ್ತಿ ಮಾಡಿರುತ್ತಾರೆಂದು ಲೋಕಾಯುಕ್ತ ಕಚೇರಿಗೆ ದೂರನ್ನು ಸಲ್ಲಿಸಿರುತ್ತಾರೆ.

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ತನಿಖೆ ಕೈಗೊಂಡು ಸಲ್ಲಿಸಿರುವ ವರದಿಯಲ್ಲಿ ದೂರುದಾರರು ಶ್ರೀ ಆರ್.ದೇವರಾಜ್ ರವರ ಆಸ್ತಿಗಳಿಗೆ ಸಂಬಂಧಪಟ್ಟಂತೆ ನಮೂದು ಮಾಡಿರುವ ಬೆಲೆಯು ಅವರು ಹೊಂದಿರುವ ಆಸ್ತಿಗಳ ಬೆಲೆಗೆ ಹೊಂದಾಣಿಕೆಯಾಗುವುದಿಲ್ಲವೆಂದು, ಶ್ರೀ ಆರ್.ದೇವರಾಜ್ ರವರು ಖರೀದಿಸಿ ನೋಂದಣಿ ಮಾಡಿರುವ ಆಸ್ತಿಯ ಬೆಲೆಯು ಅರ್ಜಿದಾರರು ನಮೂದಿಸಿರುವ ಬೆಲೆಗಿಂತ ತುಂಬಾ ಕಡಿಮೆ ಇರುವುದು ಕಂಡುಬರುವುದರಿಂದ, ಸದರಿಯವರು ಅಕ್ರಮ ಆಸ್ತಿ ಮಾಡಿರುವುದು ಕಂಡುಬರುವುದಿಲ್ಲವೆಂದು, ಆದರೆ ಶ್ರೀ ಆರ್.ದೇವರಾಜ್ ರವರು ತಮ್ಮ ಹೆಸರಿನಲ್ಲಿ ಆಸ್ತಿಗಳನ್ನು

ಖರೀದಿಸುವ ಸಮಯದಲ್ಲಿ ಕೆ.ಸಿ.ಎಸ್.ಆರ್. ನಿಯಮಾವಳಿಗಳ ನಿಯಮ 23 ರನ್ವಯ ಇಲಾಖೆಯಿಂದ ಅನುಮತಿಯನ್ನು ಪಡೆಯದೆ ಜಮೀನುಗಳನ್ನು ಖರೀದಿಸಿ ಕೆ.ಸಿ.ಎಸ್.ಆರ್. ನಿಯಮಗಳನ್ನು ಉಲ್ಲಂಘನೆ ಮಾಡಿರುವುದಾಗಿ ವರದಿಯಲ್ಲಿ ತಿಳಿಸಿರುತ್ತಾರೆ.

ಲೋಕಾಯುಕ್ತ ಕಚೇರಿಯು ಈ ವಿಷಯದ ಕುರಿತಂತೆ ಶ್ರೀ ಆರ್. ದೇವರಾಜ್ ರವರಿಂದ ಆಕ್ಷೇಪಣೆಯನ್ನು ಪಡೆದುಕೊಂಡಿದ್ದು, ಸದರಿ ಆಕ್ಷೇಪಣೆಯಲ್ಲಿ ತಾವು ರೈತ ಕುಟುಂಬದಿಂದ ಬಂದಿದ್ದು, ಸದರಿ ಜಮೀನುಗಳನ್ನು ಸುಮಾರು 15-20 ವರ್ಷಗಳ ಹಿಂದೆಯೇ ಖರೀದಿ ವ್ಯವಹಾರ ಮಾಡಿದ್ದು, ನೋಂದಣಿ ಮಾತ್ರ ವಿಳಂಬವಾಗಿರುತ್ತದೆ. ಈ ಜಮೀನುಗಳು ಶಾನುಭೋಗ ಇನಾಂ ಜಮೀನುಗಳಾಗಿದ್ದು, ಮರು ಮಂಜೂರಾತಿ ಆದ ನಂತರ ನೋಂದಣಿ ಮಾಡಿಸಿದ್ದು, ಆ ಸಮಯದಲ್ಲಿ ಇಲಾಖಾ ಅನುಮತಿ ಪಡೆಯಲು ತಿಳುವಳಿಕೆ ಇಲ್ಲದ್ದರಿಂದ ಅನುಮತಿ ಪಡೆದಿರುವುದಿಲ್ಲವೆಂದು, ತಿಳುವಳಿಕೆ ಇದ್ದರೆ ಸೇವಾ ನಿಯಮಗಳನ್ನು ಉಲ್ಲಂಘನೆ ಮಾಡುತ್ತಿರಲಿಲ್ಲವೆಂದು, ಅಲ್ಲದೇ ಇನ್ನಾವುದೇ ಅವ್ಯವಹಾರಗಳನ್ನು ಮಾಡಿರುವುದಿಲ್ಲವೆಂದು ಹಾಗೂ ಪ್ರತಿ ವಾರ್ಷಿಕ ಆಸ್ತಿಗಳ ಘೋಷಣೆಗಳನ್ನು ಸಹ ಮಾಡಿರುವುದಾಗಿ ತಿಳಿಸಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತ-2 ರವರು ತನಿಖಾ ವರದಿ ಮತ್ತು ದಾಖಲಾತಿಗಳನ್ನು ಪರಿಶೀಲಿಸಿದ್ದು, ಶ್ರೀ ಆರ್. ದೇವರಾಜ್ ಇವರು ಜಮೀನು ನೋಂದಣಿ ಮಾಡಿಸುವ ಸಮಯದಲ್ಲಿ ಇಲಾಖಾ ಅನುಮತಿ ಪಡೆಯಲು ತಿಳುವಳಿಕೆ ಇಲ್ಲದ್ದರಿಂದ ಅನುಮತಿ ಪಡೆದಿರುವುದಿಲ್ಲವೆಂದು ಹಾಗೂ 15-20 ವರ್ಷಗಳ ಹಿಂದೆಯೇ ಖರೀದಿ ವ್ಯವಹಾರ ಮಾಡಿರುವುದಾಗಿ ತಿಳಿಸಿದ್ದು, ಈ ಬಗ್ಗೆ ಯಾವುದೇ ದಾಖಲಾತಿಗಳನ್ನು ಹಾಜರು ಪಡಿಸಿರುವುದಿಲ್ಲವೆಂದು, ಆ ರೀತಿಯಲ್ಲಿ ಖರೀದಿ ವ್ಯವಹಾರ ಮಾಡಿದ್ದಲ್ಲಿ ಅದನ್ನು ಸಕ್ಷಮ ಇಲಾಖೆಯ ಗಮನಕ್ಕೆ ತರುವುದು ಅವರ ಕರ್ತವ್ಯವಾಗಿದ್ದು ಈ ಕಾರಣಗಳಿಂದ ಆಪಾದಿತ ಅಧಿಕಾರಿಯ ಆಕ್ಷೇಪಣೆಯನ್ನು ಒಪ್ಪಲು ಯಾವುದೇ ಆಧಾರವಿಲ್ಲವೆಂದು, ಸದರಿಯವರು ಜಮೀನು ಖರೀದಿಸುವಾಗ ಇಲಾಖೆಯಿಂದ ಅನುಮತಿ ಪಡೆಯದೇ ಕೆ.ಸಿ.ಎಸ್.ಆರ್. ನಿಯಮಗಳನ್ನು ಉಲ್ಲಂಘನೆ ಮಾಡಿರುವುದು ಸ್ಪಷ್ಟವಾಗಿ ಕಂಡುಬರುವುದರಿಂದ ಹಾಗೂ ಅವರು ಸಲ್ಲಿಸಿರುವ ಆಕ್ಷೇಪಣೆಯಲ್ಲಿ ಅವರ ವಿರುದ್ಧದ ಶಿಸ್ತು ನಡವಳಿಯನ್ನು ಕೈ ಬಿಡಲು ಸೂಕ್ತ / ಸಮಂಜಸ / ಸಮಾಧಾನಕರ ಕಾರಣ ತೋರಿಸಿಲ್ಲದಿರುವುದರಿಂದ ಹಾಗೂ ಸದರಿಯವರು ಸಾರ್ವಜನಿಕ / ಸರ್ಕಾರಿ ನೌಕರರಾಗಿದ್ದು ತಮ್ಮ ಕರ್ತವ್ಯ ಪಾಲನೆಯಲ್ಲಿ ನಿಷ್ಠೆಯನ್ನು ತೋರದೆ ಕರ್ತವ್ಯ ಲೋಪವೆಸಗಿ ಕೆ.ಸಿ.ಎಸ್.ಆರ್. ನಿಯಮಗಳನ್ನು ಉಲ್ಲಂಘನೆ ಮಾಡಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ ನಿಯಮ 3(1) (ii) ಮತ್ತು (iii) ನ್ನು ರನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ತಿಳಿಸುತ್ತಾ, ಪ್ರಸಕ್ತ ಸದರಿ ಆಪಾದಿತ ಅಧಿಕಾರಿಯು ದಿ. 31.05.2016ರಂದು ಸೇವೆಯಿಂದ ನಿವೃತ್ತಿ ಹೊಂದಿದ್ದು, ಇವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವ ಸಲುವಾಗಿ ಕೆ.ಸಿ.ಎಸ್.ಆರ್. ನಿಯಮ 214 (2) (ಬಿ) (i) ಈ ರಡಿ ಮಂಜೂರಾತಿ ನೀಡಿ, ಪ್ರಕರಣವನ್ನು ತಮಗೆ ವಹಿಸುವಂತೆ ಕೋರಿರುತ್ತಾರೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ಮಾಹಿತಿ ಮತ್ತು ದಾಖಲೆಗಳನ್ನು ಪರಿಶೀಲಿಸಿದೆ. ಪ್ರಕರಣದಲ್ಲಿ ಭಾಗಿಯಾಗಿರುವ ಶ್ರೀ ಆರ್. ದೇವರಾಜ್ ಇವರು ಜಮೀನು ನೋಂದಣಿ ಮಾಡಿಸುವ ಸಮಯದಲ್ಲಿ ಇಲಾಖಾ ಅನುಮತಿ ಪಡೆಯದೇ ಕರ್ತವ್ಯ ಲೋಪವೆಸಗಿ ಕೆ.ಸಿ.ಎಸ್.ಆರ್. ನಿಯಮಗಳನ್ನು ಉಲ್ಲಂಘನೆ ಮಾಡಿರುವುದು ತನಿಖಾ ವರದಿ ಹಾಗೂ ದಾಖಲೆಗಳಿಂದ ಸ್ಪಷ್ಟವಾಗುತ್ತದೆ. ಹಾಗಾಗಿ ಸದರಿಯವರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ

-3-

ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1) (ii) ಮತ್ತು (iii) ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಅವಶ್ಯವಿರುತ್ತದೆ. ಆದ್ದರಿಂದ, ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ ನಿಯಮ 11 ರಂತೆ ಇಲಾಖಾ ವಿಚಾರಣೆ ನಡೆಸಲು ಕೆ.ಸಿ.ಎಸ್.ಆರ್. ನಿಯಮ 214(2)(ಬಿ)(i) ರಡಿ ಮಂಜೂರಾತಿ ನೀಡಿ, ಕ.ನಾ.ಸೇ (ವ.ನಿ.ಮೇ) ನಿಯಮಗಳ ನಿಯಮ 14 (ಎ) ರನ್ವಯ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-2 ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ : ಗ್ರಾಅಪ 194 ಕೆಎಸ್‌ಎಸ್ 2016**
**ಬೆಂಗಳೂರು, ದಿನಾಂಕ:3.9.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಆರ್. ದೇವರಾಜು, ಅಂದಿನ ಸಹಾಯಕ ಯೋಜನಾಧಿಕಾರಿ (ಪ್ರಸ್ತುತ ನಿವೃತ್ತ) ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರಂತೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 214(2)(ಬಿ)(i) ರಡಿ ಮಂಜೂರಾತಿ ನೀಡಿ ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ ನಿಯಮ 14 (ಎ) ರಂತೆ ಮಾನ್ಯ ಉಪ ಲೋಕಾಯುಕ್ತ- 2 ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

03/9/2016

(ಎಸ್.ರಂಗನಗೌಡ) 3/9/2016
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ.
4. ಉಪ ನಿಬಂಧಕರು (ವಿಚಾರಣೆಗಳು-1), ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಶ್ರೀ ಆರ್. ದೇವರಾಜು, ಅಂದಿನ ಸಹಾಯಕ ಯೋಜನಾಧಿಕಾರಿ (ಪ್ರಸ್ತುತ ನಿವೃತ್ತ) ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ ಜಿಲ್ಲೆ ಇವರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ ಇವರ ಮುಖಾಂತರ.
6. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
7. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
8. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ : ಗಣಕ ಕೋಶ